ರಾಯನಾಳ ಗ್ರಾಮದ ಪ್ರೌಢ ಶಾಲೆಯನ್ನು ಮೇಲ್ದರ್ಜೆಗೇರಿಸುವುದು

473 - ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ತಾಲ್ಲೂಕಿನ ರಾಯನಾರ ಗ್ರಾಮದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಆ ಪ್ರೌಢಶಾಲೆಯನ್ನು ಸರ್ಕಾರಿ ಪದವಿ ಪೂರ್ವ ಕಾಲೇಜನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಇ) ಹಾಗಿದ್ದಲ್ಲಿ ಅದನ್ನು ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ರಾಯನಾಳ ಸರ್ಕಾರಿ ಪ್ರೌಢಶಾಲೆಯಲ್ಲಿ 210 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.

ಆ) ರಾಯನಾಳ ಸರ್ಕಾರಿ ಪ್ರೌಢಶಾಲೆಯನ್ನು ಪದವಿ ಪೂರ್ವ ಕಾಲೇಜಾಗಿ ಸರ್ಕಾರವು ಈಗಾಗಲೇ ಪರಿವರ್ತಿಸಿದೆ.

ಇ) ಸರ್ಕಾರಿ ಆದೇಶ ಸಂಖ್ಯೆ ಇಡಿ 420 ಎಸ್ಹೆಚ್ಚಿಚ್ 91 ದಿನಾಂಕ 11-9-1991ರಲ್ಲಿ ರಾಯನಾಳ ಸರ್ಕಾರಿ ಪ್ರೌಢಶಾಲೆಯನ್ನು ಪದವಿ ಪೂರ್ವ ಕಾಲೇಜಾಗಿ 1991-92ನೇ ಸಾಲಿನಿಂದ ಮೇಲ್ದರ್ಜೆಗೇರಿಸಿದೆ.

ಕಾದಿಟ್ಟ ಅರಣ್ಯ ಪ್ರದೇಶದ ಒತ್ತುವರಿಯ ಸಕ್ರಮ

539 - ಶ್ರೀ ಆರ್. ನಾರಾಯಣ (ಬೆಳ್ಳಾವಿ): ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾದಿಟ್ಟ ಅರಣ್ಯ ಪ್ರದೇಶಗಳೆಂದು ಮಹಾರಾಜ ಸರ್ಕಾರದಲ್ಲಿ (1917, 1927) ಘೋಷಿಸಿರುವ ಪ್ರದೇಶಗಳ ಗಡಿಗಳು ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆಯೆ?

ಆ) ಸದರಿ ಕಾದಿಟ್ಟ ಅರಣ್ಯ ಪ್ರದೇಶಗಳನ್ನು ಅತಿಕ್ರಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಅತಿಕ್ರಮಣದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದ್ದಲ್ಲಿ ಅದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಈ) ಕಾದಿಟ್ಟ ಅರಣ್ಯಗಳೆಂದು ಘೋಷಿಸಲ್ಪಟ್ಟಂತಹ ಪ್ರದೇಶವು ಕಂದಾಯ ಇಲಾಖೆಯ ದಾಖಲಾತಿಗಳಲ್ಲಿ ನಮೂದಿಸಲ್ಪಟ್ಟಿದೆಯೇ?

ಉ) 'ಸಿ ಮತ್ತು ಡಿ' ವರ್ಗದ ಪ್ರದೇಶಗಳಲ್ಲಿ ಸಾಮಾಜಿಕ ಅರಣ್ಯೀಕರಣ ನಡೆದಿದ್ದು ಸದರಿ ಜಮೀನು ಅರಣ್ಯ ಇಲಾಖೆಗೆ ಕಂದಾಯ ಇಲಾಖೆಯಿಂದ ವರ್ಗಾಯಿಸಲ್ಪಟ್ಟಿದೆಯೇ?

ಊ) ಸದರಿ 'ಸಿ ಮತ್ತು ಡಿ' ವರ್ಗದ ಜಮೀನುಗಳು ಕಂದಾಯ ಇಲಾಖೆಯಿಂದ ವರ್ಗಾವಣೆ ಆಗದಿದ್ದಲ್ಲಿ ಸರ್ಕಾರವರು ಈ ಬಗ್ಗೆ ತೆಗೆದುಕೊಂಡ ಕ್ರಮವೇನು?

ಋ) ಸಾಮಾಜಿಕ ಅರಣ್ಯೀಕರಣ ಇದ್ದ ನೆಡುತೋಪುಗಳಲ್ಲಿ ಅಕ್ರಮಸಾಗುವಳಿ ಮಾಡಿ ಸಕ್ರಮಗೊಳಿಸಲು ತಾಲ್ಲೂಕು ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸುವ ಸಮಿತಿಯ ಮುಂದೆ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಋೂ) ಬಂದಿದ್ದಲ್ಲಿ ಆ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಎಂ.ಪಿ. ಕೇಶವಮೂರ್ತಿ (ಅರಣ್ಯ ರಾಜ್ಯ ಸಚಿವರು):